# ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಆಡಳಿತಾಧಿಕಾರಿಗಳ ಕಛೇರಿ, ಗಾ.ಕೃ.ವಿ.ಕೇ., ಬೆಂಗಳೂರು – 560 065

ಸಂಖ್ಯೆ ಆಕ/ಆಕಾ/ಸಾಮಾನ್ಯ/ಕನ್ನಡ ಭಾಷೆ ಅನುಷ್ಠಾನ/2021-22 ದಿನಾಂಕ: 02.02.2022

## ಸುತ್ತೋಲೆ

ವಿಷಯ: ಕನ್ನಡ ಆಡಳಿತ ಭಾಷೆಯ ಜೊತೆಗೆ ಸಾರ್ವಭೌಮ ಭಾಷೆಯಾಗಿದ್ದು ಕನ್ನಡ ಅಧ್ಯತೆ ಭಾಷೆಯಾಗಬೇಕೆ ಹೊರತು ಆಯ್ಕೆಯಾಗಬಾರದು –ಕುರಿತು

ಉಲ್ಲೇಖ: 1. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ ಕಅಪ್ರಾ/ ಅ/1282/ 2022 ದಿನಾಂಕ 10.01.2022

2. ಕುಲಪತಿಗಳ ಅನುಮೋದನೆ ದಿನಾಂಕ 02.02.2022

ಕನ್ನಡ ಭಾಷೆ ಹಾಗೂ ಕನ್ನಡ ಜನರ ಹಿತಾಸಕ್ತಿಯನ್ನು ಕಾಯವುದು ಜೊತೆಗೆ ತಂತ್ರಜ್ಞಾನದಲ್ಲಿ ಕನ್ನಡವನ್ನು ಆಡಳಿತದಲ್ಲಿ, ಶಿಕ್ಷಣದಲ್ಲಿ, ಉದ್ಯೋಗದಲ್ಲಿ ಅಳವಡಿಸಿ ಕನ್ನಡಿಗರಿಗೆ ಪ್ರಾತಿನಿಧ್ಯತೆ ನೀಡುವುದು ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿದೆ. ಕನ್ನಡವನ್ನು ಉಸಿರ ಭಾಷೆಯಾಗಿಸುವ ನಿಟ್ಟಿನಲ್ಲಿ ಎಲ್ಲೆಡೆ ಕನ್ನಡ ಬಳಕೆ ಅನಿವಾರ್ಯವಾಗಿದೆ.

ಕರ್ನಾಟಕದಲ್ಲಿ ಕನ್ನಡ ಆಡಳಿತ ಭಾಷೆಯ ಜೊತೆಗೆ ಸಾರ್ವಭೌಮ ಭಾಷೆಯಾಗಿದೆ. ಕನ್ನಡ ಭಾಷೆ ಅಧ್ಯತೆ ಭಾಷೆಯಾಗಬೇಕೆ ಹೊರತು ಅಯ್ಕೆಯಾಗಬಾರದು. ಕನ್ನಡ ಭಾಷೆಯನ್ನು ಕಾರ್ಯಕ್ರಮಗಳಲ್ಲಿ ಉತ್ಸಾಹದಿಂದ ಬಳಸಬೇಕು. ಕೃಷಿ ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದಂತೆ ಇನ್ನು ಮುಂದೆ ನಡೆಯುವ ಕಾರ್ಯಕ್ರಮಗಳಲ್ಲಿ ವೇದಿಕೆ ಮೇಲೆ ಅಳವಡಿಸಲಾಗುವ ಪರದೆಗಳಲ್ಲಿ, ಫಲಕಗಳಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸುವಂತೆ ಸಂಬಂಧಪಟ್ಟವರಿಗೆ ಕಟ್ಟುನಿಟ್ಟಿನ ನಿರ್ದೇಶನಗಳನ್ನು ನೀಡುವಂತೆ ಕನ್ನಡ ಅಭಿವೃದ್ಧಿ ಪ್ರಾಧಿಕರ ಸೂಚಿಸಿದೆ.

ಆದುದರಿಂದ, ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಎಲ್ಲಾ ಕಾರ್ಯಾಲಯ/ಕಛೇರಿ/ ಪ್ರಾಯೋಜನೆ/ ವಿಭಾಗ/ ಮಹಾವಿದ್ಯಾಲಯ/ ಸಂಶೋಧನಾ ಕೇಂದ್ರ/ ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ಎಲ್ಲಾ ಹಂತಗಳಲ್ಲಿ ಇನ್ನು ಮುಂದೆ ನಡೆಯುವ ಎಲ್ಲಾ ಕಾರ್ಯಕ್ರಮಗಳಲ್ಲಿ ವೇದಿಕೆ ಮೇಲೆ ಅಳವಡಿಸಲಾಗುವ ಪರದೆಗಳಲ್ಲಿ, ಫಲಕಗಳಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸುವಂತೆ ಸಂಬಂಧಪಟ್ಟವರಿಗೆ ಕಟ್ಟುನಟ್ಟಿನ ನಿರ್ದೇಶನಗಳನ್ನು ನೀಡುವುದರೊಂದಿಗೆ ಮೇಲಿನ ವಿಷಯಕ್ಕೆ ಸಂಬಂಧಿಸದಂತೆ ಕನ್ನಡವನ್ನು ಅನುಷ್ಠಾನಗೊಳಿಸುವ ಕಾರ್ಯವನ್ನು ಕಟ್ಟುನಿಟ್ಟಾಗಿ ಒಗ್ಗಟ್ಟಾಗಿ ಪಾಲಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಆಡಳಿತಾಧಿಕಾರಿಗಳು

ಪ್ರತಿಗಳು:

1) ಎಲ್ಲಾ ಅಧಿಕಾರಿಗಳು, ಕೃವಿವಿ, ಬೆಂಗಳೂರು.
2) ಎಲ್ಲಾ ಡೀನ್‌ಗಳವರು, ಕೃವಿವಿ, ಬೆಂಗಳೂರು.
3) ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳು, ಕೃವಿವಿ, ಬೆಂಗಳೂರು.
4) ಎಲ್ಲಾ ಪ್ರಾಯೋಜನೆ / ಕೃಷಿ ಸಂಶೋಧನಾ ಕೇಂದ್ರಗಳು ಹಾಗೂ ಕೃಷಿ ವಿಜ್ಞಾನ ಕೇಂದ್ರಗಳ ಮುಖ್ಯಸ್ಥರುಗಳು, ಕೃವಿವಿ, ಬೆಂಗಳೂರು.
5) ಕುಲಪತಿಗಳ ಕಾರ್ಯದರ್ಶಿಗಳು, ಕೃವಿವಿ, ಬೆಂಗಳೂರು ಇವರ ಮಾಹಿತಿಗಾಗಿ
6) ಕಡತ

ಈ ಸುತ್ತೋಲೆಯನ್ನು ಕಛೇರಿಯ ಎಲ್ಲಾ ಸಿಬ್ಬಂದಿಯವರ ಗಮನಕ್ಕೆ ತರುವುದು.